**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಕೋಟಾ ಶ್ರೀನಿವಾಸ ಪೂಜಾರಿ ರವರ ನಿಯಮ 72 ರಡಿ ಗಮನ ಸೆಳೆಯುವ ಸೂಚನೆ:**

**ಸೂಚನೆ**

ಸಮಾಜದಲ್ಲಿ ಸಮಾಜಿಕವಾಗಿ ಆರ್ಥಿಕವಾಗಿ ಕಟ್ಟಕಡೆಯಲ್ಲಿರುವ ಜೋಗಿ ಸಮಾಜ, ಹೇಳವ ಸಮಾಜ, ಗೊಂದಾಳಿ ಸಮಾಜವನ್ನು ಪರಿಶಿಷ್ಟ ಜಾತಿಗೆ ಸೇರಿಸುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

**ಉತ್ತರ.**

ಪ್ರಸ್ತುತ ಜೋಗಿ ಜಾತಿಯು ಹಿಂದುಳಿದ ವರ್ಗಗಳ ಪ್ರವರ್ಗ-1ರ ಕ್ರಮ ಸಂಖ್ಯೆ 21(a), ಹೇಳವ ಜಾತಿಯು ಹಿಂದುಳಿದ ವರ್ಗಗಳ ಪ್ರವರ್ಗ-1 ರ ಕ್ರಮ ಸಂಖ್ಯೆ 5(j) ಮತ್ತು ಗೊಂದಾಳಿ ಜಾತಿಯು ಹಿಂದುಳಿದ ವರ್ಗಗಳ ಪ್ರವರ್ಗ-1 ರ ಕ್ರಮ ಸಂಖ್ಯೆ 72(a) ರಲ್ಲಿ ಇರುತ್ತದೆ. ಈ ಮೂರು ಸಮುದಾಯಗಳನ್ನು ಹಿಂದುಳಿದ ವರ್ಗಗಳ ಪ್ರವರ್ಗ-1 ರಲ್ಲಿರುವ ಮೀಸಲಾತಿ ಹಾಗೂ ಇತರೆ ಸೌಲಭ್ಯಗಳನ್ನು ಪಡೆದುಕೊಳ್ಳುತ್ತಿದ್ದಾರೆ.

ಭಾರತ ಸಂವಿಧಾನದ ಅನುಚ್ಛೇದ 341 (2) ರ ಪ್ರಕಾರ ಯಾವುದೇ ಜಾತಿ ಅಥವಾ ಉಪಜಾತಿಯನ್ನು ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಸೇರಿಸುವ/ಬದಲಾಯಿಸುವ ಅಧಿಕಾರ ಭಾರತದ ಸಂಸತ್‌ಗೆ ಇರುತ್ತದೆ. ರಾಜ್ಯ ಸರ್ಕಾರಕ್ಕೆ ಈ ರೀತಿಯ ಅಧಿಕಾರ ಇರುವುದಿಲ್ಲ. ಆದ್ದರಿಂದ ಮೇಲ್ಕಂಡ 3 ಜಾತಿಗಳನ್ನು ಪರಿಶಿಷ್ಟ ಜಾತಿಯೆಂದು ಪರಿಗಣಿಸಲು ಸಾಧ್ಯವಿಲ್ಲ.

**ಸಕಇ 493 ಎಸ್‌ಎಲ್ ಪಿ 2023**

**(ಡಾ|| ಹೆಚ್.ಸಿ ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು